ಶ್ರೀ ಹೆಚ್.ಜಿ.ಗೋವಿಂದೇಗೌಡ (ಪ್ರಾಥಮಿಕ, ಪ್ರೌಢ ಮತ್ತು ಉನ್ನತ ಶಿಕ್ಷಣ ಸಚಿವರು):

ಅ) ಉಪನ್ಯಾಸಕರು : 06

ನೌಕರ ಸಿಬ್ಬಂದಿ : 29

ಆ) ಬಂದಿದೆ.

ಇ) ಉಪನ್ಯಾಸಕರ ಖಾಲಿ ಹುದ್ದೆಗಳನ್ನು ಲೋಕಸೇವಾ ಆಯೋಗದ ಮೂಲಕ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಇತರ ಬೋಧಕೇತರ ನೌಕರರ ವರ್ಗದ ಖಾಲಿ ಹುದ್ದೆಗಳನ್ನು ಪ್ರಸಕ್ತ ಸಾಲಿನ ಸಾಮಾನ್ಯ ವರ್ಗಾವಣೆ ಸಮಯದಲ್ಲಿ ಸಾಧ್ಯವಾದಷ್ಟು ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದು. ಹಾಗೂ ಈಗಾಗಲೇ ವಿದ್ಯುತ್ ಯಾಂತ್ರಿಕ ಸ್ವಯಂ ಚಾಲಕ ವಿಭಾಗಗಳಿಗೆ ಉಪಕರಣಗಳನ್ನು ಸರಬರಾಜು ಮಾಡಲಾಗಿದೆ.

ವಿಷಯ: ಕೊಡಗು ಜಿಲ್ಲೆಯಲ್ಲಿ ಕೊಳವೆ ಬಾವಿ ದುರಸ್ಥಿಗೊಳಿಸುವುದು.

971 (1402)

ಶ್ರೀ ಡಿ.ಎಸ್.ಮಾದಪ್ಪ (ಮಡಿಕೇರಿ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲೆಯಲ್ಲಿರುವ ಒಟ್ಟು ಕೊಳವೆ ಬಾವಿಗಳ ಸಂಖ್ಯೆ ಎಷ್ಟು? (ತಾಲ್ಲೂಕುವಾರು ವಿವರ ನೀಡುವುದು)

ಆ) ಇವುಗಳಲ್ಲಿ ಉಪಯೋಗವಿಲ್ಲದೆ ಕೆಟ್ಟುನಿಂತಿರುವ ಕೊಳವೆಬಾವಿಗಳೆಷ್ಟು? (ತಾಲ್ಲೂಕುವಾರು ವಿವರ ಒದಗಿಸುವುದು)

ಇ) ಇವುಗಳ ದುರಸ್ತಿಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಈ) ಒಂದು ಕೊಳವೆ ಬಾವಿ ತೆಗೆಯಲು ಆಗುವ ವೆಚ್ಚವೆಷ್ಟು?

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ ಮತ್ತು ಆ) ತಾಲ್ಲೂಕುವಾರು ವಿವರಗಳು ಈ ಕೆಳಗಿನಂತಿವೆ:

ಕ್ರಮ ಸಂಖ್ಯೆ	ತಾಲ್ಲೂಕು	ಕೊಳವೆ ಬಾವಿಗಳ ಸಂಖ್ಯೆ	ಮಾರ್ಚ್ 98ರ ಅಂತ್ಯಕ್ಕೆ ಕೆಟ್ಟು ನಿಂತಿರುವ ಕೈಪಂಪು ಕೊಳವೆಬಾವಿಗಳು
1.	ಮಡಿಕೇರಿ	869	12
2.	ಸೋಮವಾರಪೇಟೆ	1895	20
3.	ವೀರಾಜಪೇಟೆ	1211	15
	ಒಟ್ಟು :	3975	47

ಇ) ಕೊಡಗು ಜಿಲ್ಲೆಯ ಪ್ರತಿಯೊಂದು ಜಿಲ್ಲಾಪಂಚಾಯತ್ ಇಂಜಿನಿಯರಿಂಗ್ ಉಪವಿಭಾಗವು ಒಂದೊಂದು ಸಂಚಾರಿ ಘಟಕವನ್ನು ಹೊಂದಿದ್ದು, ಕೈಪಂಪು ದುರಸ್ತಿ ಕಾರ್ಯಗಳನ್ನು ನಿರ್ವಹಿಸುತ್ತದೆ.

ಈ) ಕೊಳವೆಬಾವಿಯೊಂದರ ಸರಾಸರಿ ಅಂದಾಜು ವೆಚ್ಚ ರೂ. 50,000-00 (ಕೈಪಂಪು ಸೇರಿದಂತೆ)

ವಿಷಯ: ಕೊಡಗು ಜಿಲ್ಲೆಯಲ್ಲಿ ಪ್ರಾಥಮಿಕ ಶಾಲೆಗಳ ಕೊಠಡಿಗಳ ನಿರ್ಮಾಣ.

972 (1406)

ಶ್ರೀ ಡಿ.ಎಸ್.ಮಾದಪ್ಪ (ಮಡಿಕೇರಿ): ಮಾನ್ಯ ಪ್ರಾಥಮಿಕ, ಪ್ರೌಢ ಮತ್ತು ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) 1995-96, 1996-97 ಮತ್ತು 1997-98ನೇ ಸಾಲಿನಲ್ಲಿ ಕೊಡಗು ಜಿಲ್ಲೆಯಲ್ಲಿ ಎಷ್ಟು ನೂತನ ಪ್ರಾಥಮಿಕ ಶಾಲೆಗಳ ಕೊಠಡಿ ನಿರ್ಮಿಸಲು ಹಣ ಬಿಡುಗಡೆ ಮಾಡಲಾಗಿದೆ?

ಆ) ಎಷ್ಟು ಕೊಠಡಿಗಳ ಕೆಲಸ ಪೂರ್ಣಗೊಂಡಿದೆ?

ಶ್ರೀ ಹೆಚ್.ಜಿ.ಗೋವಿಂದೇಗೌಡ (ಪ್ರಾಥಮಿಕ, ಪ್ರೌಢ ಮತ್ತು ಉನ್ನತ ಶಿಕ್ಷಣ ಸಚಿವರು):